ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ಗೃಹ - ಬೆಂಗಳೂರು ಗಲಭೆ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 22/8/2020

**ಬೊಮ್ಮಾಯಿಗೆ ಮಾತುಕತೆ ಹೊಣೆ । ಸಾಕ್ಷ್ಯ ಸಮೇತ ಕೇಂದ್ರಕ್ಕೆ ವರದಿ ಸಲ್ಲಿಕೆ**

# ಎಸ್‌ಡಿಪಿಐ ನಿಷೇಧಕ್ಕೆ ಕೇಂದ್ರದ ಜತೆ ಚರ್ಚೆ

21/8/20

**ಸಂ.ಕ.ಸಮಾಚಾರ, ಬೆಂಗಳೂರು**

ರಾಜ್ಯದಲ್ಲಿ ಎಸ್‌ಡಿಪಿಐ ಸಂಘಟನೆ ನಿಷೇಧ ಮಾಡುವ ಕುರಿತಂತೆ ಕೇಂದ್ರ ಸರ್ಕಾರದೊಂದಿಗೆ ಚರ್ಚೆ ಮಾಡುವ ಜವಾಬ್ದಾರಿಯನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರಿಗೆ ನೀಡಿದ್ದಾರೆ.

ಎಸ್‌ಡಿಪಿಐ ಸಂಘಟನೆಯನ್ನು ನಿಷೇಧಿಸುವ ಕುರಿತಂತೆ ಗುರುವಾರ ನಡೆದ ಸಚಿವ ಸಂಪುಟದಲ್ಲಿ ದೀರ್ಘ ಕಾಲದ ಚರ್ಚೆ ನಡೆದಿದ್ದು, ಈ ವೇಳೆ ಎಸ್‌ಡಿಪಿಐ ಸಂಘಟನೆ ಕೇವಲ ಒಂದು ಸಂಘಟನೆ ಮಾತ್ರವಾಗಿರದೇ ರಾಜಕೀಯ ಪಕ್ಷವಾಗಿಯೂ ಗುರುತಿಸಿಕೊಂಡಿರುವುದರಿಂದ ಈ ಸಂಘಟನೆಯನ್ನು ನಿಷೇಧ ಮಾಡುವ ಕುರಿತಂತೆ ಕೇಂದ್ರ ಗೃಹ ಇಲಾಖೆಯ ಜೊತೆ ಮಾತುಕತೆ ನಡೆಸುವ ಹೊಣೆಗಾರಿಕೆಯನ್ನು ಸಚಿವ ಬಸವರಾಜ ಬೊಮ್ಮಾಯಿ ಹೆಗಲಿಗೆ ನೀಡಿದ್ದಾರೆ.

ರಾಜ್ಯ ಪೊಲೀಸ್ ಮಹಾನಿರ್ದೇಶಕ ಪ್ರವೀಣ್ ಸೂದ್, ಬೆಂಗಳೂರು ನಗರ ಪೊಲೀಸ್ ಆಯುಕ್ತ ಕಮಲ್‌ಪಂಥ್,



ಗೃಹ ಇಲಾಖೆ ಕಾರ್ಯದರ್ಶಿ, ಹಾಗೂ ಕಾನೂನು ಇಲಾಖೆ ಮತ್ತು ಅಡ್ವಕೇಟ್ ಜನರಲ್ ಅವರೊಂದಿಗೆ ಚರ್ಚಿಸಿ ಎಸ್‌ಡಿಪಿಐ ಸಂಘಟನೆಯ ಕಾರ್ಯಕರ್ತರು ನಡೆಸಿರುವ ಕಾನೂನು ಬಾಹಿರ ಚಟುವಟಿಕೆಗಳ ಸಾಕ್ಷ್ಯಧಾರಗಳನ್ನು ಕಲೆಹಾಕಿ, ಕೇಂದ್ರಕ್ಕೆ ವರದಿ ನೀಡಬೇಕು. ಸೂಕ್ತವಾದ ದಾಖಲೆಗಳನ್ನು ಕಲೆಹಾಕಿ, ಕೇಂದ್ರ ಗೃಹ ಸಚಿವ ಅಮಿತ್ ಷಾ, ಹಾಗೂ ಅಧಿಕಾರಿಗಳಿಗೆ ಪ್ರತ್ಯೇಕವಾದ ವರದಿಯನ್ನು ನೀಡುವ ಜವಾಬ್ದಾರಿಯನ್ನು ಬೊಮ್ಮಾಯಿ ಅವರ ಹೆಗಲಿಗೆ ನೀಡಲಾಗಿದೆ ಎಂದು ತಿಳಿದು ಬಂದಿದೆ.

ಎಸ್‌ಡಿಪಿಐ ಸಂಘಟನೆಯನ್ನು ರಾಜ್ಯದಲ್ಲಿ ನಿಷೇಧಿಸುವ ಸಂಬಂಧ ಸಾಕ್ಷ್ಯಾಧಾರಗಳನ್ನು ಸಿದ್ಧಪಡಿಸುವತ್ತ ಸರ್ಕಾರ ಕಾರ್ಯನ್ಮೋಖವಾಗಿದೆ. ರಾಜ್ಯದಲ್ಲಿ ಈ ಹಿಂದೆ ಕಳೆದ ಎಂಟು ವರ್ಷಗಳಲ್ಲಿ ಎಸ್‌ಡಿಪಿಐ ಭಾಗಿಯಾಗಿರುವ ಪ್ರಕರಣಗಳ ಪಟ್ಟಿಯನ್ನು ಸಿದ್ಧಪಡಿಸುತ್ತಿರುವ ಸರ್ಕಾರ, ಸಾಕ್ಷ್ಯ ಸಮೇತ ವಿಸ್ತೃತ ವರದಿಯನ್ನು ಕೇಂದ್ರಕ್ಕೆ ಸಲ್ಲಿಸಲಿದೆ. ಈಗಾಗಲೇ ಗೃಹ ಇಲಾಖೆಯ ಹಿರಿಯ ಅಕಾರಿಗಳ ಒಂದು ತಂಡ ಎಸ್‌ಡಿಪಿಐ ಸಂಘಟನೆ ಭಾಗಿಯಾದ ಪ್ರಕರಣಗಳ ಪಟ್ಟಿಯನ್ನು ಸಾಕ್ಷ್ಯಾಧಾರ ಸಮೇತ ಕಲೆ ಹಾಕುತ್ತಿದೆ.

ಎಸ್‌ಡಿಪಿಐ, ಪಿಎಫ್‌ಐ ಸದಸ್ಯರ ವಿರುದ್ಧ ದಾಖಲಾಗಿರುವ ಪ್ರಕರಣಗಳ ಸ್ವರೂಪ, ಪ್ರಕರಣಗಳ ತನಿಖೆ, ಪ್ರಕರಣಗಳಲ್ಲಿ ಸಂಘಟನೆಯ ಪಾತ್ರ, ಕೋರ್ಟ್‌ನಲ್ಲಿ ಸಲ್ಲಿಕೆಯಾಗಿರುವ ಆರೋಪಪಟ್ಟಿ ಸೇರಿ ಸಂಪೂರ್ಣ ವರದಿಯನ್ನು ಕಡತಗಳ ಸಮೇತವಾಗಿ ಕಳುಹಿಸಿ ಕೊಡಲು ತೀರ್ಮಾನಿಸಿದೆ. ಸರ್ಕಾರ ಹೇಳುವಂತೆ ಎಸ್‌ಡಿಪಿಐ ಮತ್ತು ಅದರ ಮೂಲ ಸಂಘಟನೆ ಪಿಎಫ್‌ಐ ಸದಸ್ಯರ ವಿರುದ್ಧ 2008ರಿಂದೀಚೆಗೆ ಒಟ್ಟು 19 ಪ್ರಕರಣಗಳು ದಾಖಲಾಗಿವೆ.

# ಮತ್ತೆ ದೂರವಾಣಿ ಕದ್ದಾಲಿಕೆಯ ಸದ್ದು

**1ನೇ ಪುಟದಿಂದ ▶** ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಫೋನ್ ಕದ್ದಾಲಿಕೆ ಮಾಡುವ ಪ್ರಶ್ನೆಯೇ ಇಲ್ಲ. ಅವರ ನಾಯಕರು ಫೋನ್ ಕಾಲ್ ಮಾಡಿದಾಗ ಮಾತನಾಡಲು ಸಾಧ್ಯವಾಗದಿದ್ದರೆ, ಟೆಲಿಫೋನ್ ಕಂಪನಿಯನ್ನು ವಿಚಾರಿಸಬೇಕು.ಅದನ್ನು ಬಿಟ್ಟು ಫೋನ್ ಟ್ಯಾಪಿಂಗ್ ಎಂದು ಆರೋಪ ಮಾಡುವುದು ಸರಿಯಲ್ಲ ಎಂದು ಹೇಳಿದ್ದಾರೆ.

ಈಗಾಗಲೇ ಅವರು ಭಾಗಿಯಾಗಿದ್ದ ಸರ್ಕಾರ ಟೆಲಿಫೋನ್ ಟ್ಯಾಪಿಂಗ್ ಮಾಡಿದ್ದನ್ನು ಸಿಬಿಐ ವಿಚಾರಣೆ ಮಾಡುತ್ತಿದೆ. ಟೆಲಿಫೋನ್ ಟ್ಯಾಪಿಂಗ್ ಅನುಭವ ಅವರ ಸರ್ಕಾರದಲ್ಲಿಯೇ ಇರುತ್ತದೆ. ಸರ್ಕಾರ ಡಿ.ಕೆ.ಶಿವಕುಮಾರ್ ಅವರ ಚಟುವಟಿಕೆಗಳ ಬಗ್ಗೆ ತಲೆ ಕೆಡಿಸಿಕೊಂಡಿಲ್ಲ, ಅದರ ಅವಶ್ಯಕತೆಯೂ ಇಲ್ಲ.

ಡಿ.ಕೆ.ಶಿವಕುಮಾರ್ ಅವರು ಡಿ.ಜೆ.ಹಳ್ಳಿ ಗಲಭೆ ಪ್ರಕರಣದ ತನಿಖೆಯಲ್ಲಿ ಸರ್ಕಾರ ಹಸ್ತಕ್ಷೇಪ ಮಾಡುತ್ತಿದೆ ಎಂದು ಹೇಳಿರುವ ಆರೋಪವೂ ನಿರಾಧಾರ ಮತ್ತು ಶುದ್ಧ ಸುಳ್ಳು.

ಪೊಲೀಸರು ತಮ್ಮ ಕರ್ತವ್ಯವನ್ನು ನಿಷ್ಪಕ್ಷಪಾತವಾಗಿ ಮಾಡುತ್ತಿದ್ದಾರೆ. ಕೆಪಿಸಿಸಿ ಅಧ್ಯಕ್ಷರ ಹೇಳಿಕೆ ಪೊಲೀಸರ ನೈತಿಕ ಬಲವನ್ನು ಕುಗ್ಗಿಸುವ ಹಾಗೂ ಗಲಭೆಕೋರರನ್ನು ರಕ್ಷಿಸುವ ಪ್ರಯತ್ನವಾಗಿದೆ. ಅದು ಎಂದಿಗೂ ಸಾಧ್ಯವಿಲ್ಲ ಎಂದು ಬೊಮ್ಮಾಯಿ ತಿರುಗೇಟು ನೀಡಿದ್ದಾರೆ.

**ಭೂತದ ಬಾಯಲ್ಲಿ ಭಗವದ್ಗೀತೆ:ಆರ್. ಅಶೋಕ್:** ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಫೋನ್ ಟ್ಯಾಪಿಂಗ್ ಬಗ್ಗೆ



ಮಾಡಿರುವ ಆರೋಪ ಭೂತದ ಬಾಯಲ್ಲಿ ಭಗವದ್ಗೀತೆ ಎಂದು ಕಂದಾಯ ಸಚಿವ ಆರ್. ಅಶೋಕ್ ವ್ಯಂಗ್ಯವಾಡಿದ್ದಾರೆ.

ಒಂದು ವರ್ಷದ ಹಿಂದೆ ಅವರ ಮೈತ್ರಿ ಸರ್ಕಾರ ಇದ್ದಾಗ ಫೋನ್ ಟ್ಯಾಪ್ ಮಾಡಿಸಿ ಈಗ ಅದರ ತನಿಖೆ ನಡೆಯುತ್ತಿರುವುದು ಎಲ್ಲರಿಗೂ ಗೊತ್ತಿದೆ. ಈಗ ತನಿಖೆ ಒಂದು ಹಂತಕ್ಕೆ ಬರುತ್ತಿದೆ. ಫೋನ್ ಟ್ಯಾಪಿಂಗ್ ಹಗರಣದಲ್ಲಿ ಸಿಲುಕಿಕೊಂಡವರೇ ಆರೋಪ ಮಾಡಿದ್ದಾರೆ. ಇದು ಭೂತದ ಬಾಯಲ್ಲಿ ಭಗವದ್ಗೀತೆಯಂತೆ ಎಂದು ಹೇಳಿದರು.


ಗೃಹ ಸಚಿವ ಬಸವರಾಜ.ಬೊಮ್ಮಾಯಿ ಫೋನ್ ಟ್ಯಾಪಿಂಗ್ ಮಾಡಿಸುವಷ್ಟು ಕೆಳಮಟ್ಟಕ್ಕೆ ಇಳಿಯುವುದಿಲ್ಲ. ಬೊಮ್ಮಾಯಿ ಅಂತಹ ಸಂಸ್ಕೃತಿಯಿಂದ ಬಂದವರಲ್ಲ. ಅವರ ತಂದೆ ಮುಖ್ಯಮಂತ್ರಿಯಾಗಿ ಕೆಲಸ ಮಾಡಿದವರು. ಫೋನ್ ಕದ್ದಾಲಿಕೆ ಸಂಸ್ಕೃತಿ ಕಾಂಗ್ರೆಸ್‌ನವರಿಗೇ ಇದೆ. ರಾಜ್ಯ ಸರ್ಕಾರಕ್ಕೆ ಫೋನ್ ಟ್ಯಾಪಿಂಗ್ ಮಾಡುವ ಅಗತ್ಯವಿಲ್ಲ. ಅವರ ಪಕ್ಷದಲ್ಲಿ ಅಭದ್ರತೆ ಇದೆ. ಹೀಗಾಗಿ ಈ ತರ ಕೆಲಸ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

ಇನ್ನು ನಗರ ಪೊಲೀಸ್ ಆಯುಕ್ತ ಕಮಲ್ ಪಂಥ್‌ರಿಗೆ ಶಿವಕುಮಾರ್ ಎಚ್ಚರಿಕೆ ಮಾಡಿರುವುದಕ್ಕೆ ತಿರುಗೇಟು ನೀಡಿದ ಅವರು, ಕಮಲ್ ಪಂಥ್ ದಕ್ಷ ಅಧಿಕಾರಿ, ಗಲಭೆಯಲ್ಲಿ ಭಾಗಿಯಾದವರ ಹೆಡೆಮುರಿ ಕಟ್ಟಿದ್ದಾರೆ.

ಪೊಲೀಸರನ್ನು ಹೊಡೆದವರು, ಸ್ಟೇಷನ್‌ಗೆ ನುಗ್ಗಿ ಬೆಂಕಿ ಹಚ್ಚಿದವರನ್ನು ಬಂಧಿಸಲಾಗಿದೆ. ಆರೋಪಿಗಳನ್ನು ಬಂಧಿಸಿದ ಆಯುಕ್ತರಿಗೆ ಬಿಜೆಪಿ ಏಜೆಂಟ್ ಎಂದು ಹೇಳಿದರೆ ಹೇಗೆ? ಪೊಲೀಸ್ ಸ್ಟೇಷನ್‌ಗೆ ಬೆಂಕಿ ಇಟ್ಟವರು ಧರ್ಮಾತ್ಮರಾ? ಕಾಂಗ್ರೆಸ್ ಈ ಸಂಸ್ಕೃತಿ ಬಿಟ್ಟುಬಿಡಿ.

ಈ ದಬ್ಬಾಳಿಕೆ, ಆರೋಪ ನಿಮಗೆ ಬಂದಿರುವ ಬಳುವಳಿ ಯಾರನ್ನೋ ರಕ್ಷಣೆ ಮಾಡಲು ಪೊಲೀಸ್ ಆಯುಕ್ತರಿಗೆ ವಾರ್ನಿಂಗ್ ಕೊಡುವುದು ಸರಿಯಲ್ಲ ಎಂದು ಅಶೋಕ್ ತಿರುಗೇಟು ನೀಡಿದ್ದಾರೆ.

**ಕದ್ದಾಲಿಕೆ ದರಿದ್ರ ನಮಗೆ ಬಂದಿಲ್ಲ:ಸುಧಾಕರ್:** ಡಿ.ಕೆ. ಶಿವಕುಮಾರ್ ಅವರೇ, ನೀವು ಸಮ್ಮಿಶ್ರ ಸರ್ಕಾರದಲ್ಲಿ ಇದ್ದಾಗ



ಧರ್ಮ, ಸಂಸ್ಕೃತಿ ಪ್ರತೀಕ, ಪವಿತ್ರವಾದ ಮನಸ್ಸುಳ್ಳ ಆದಿಚುಂಚನಗಿರಿ ಶ್ರೀ, ರಂಭಾಪುರಿ, ಸಿದ್ದಗಂಗಾ, ಸಿರಿಗೆರೆ, ಸುತ್ತೂರು ಮಠ ಸೇರಿದಂತೆ ಏಳು ಜನ ಸ್ವಾಮೀಜಿಗಳ ಫೋನ್ ಟ್ಯಾಪಿಂಗ್ ಮಾಡಿರುವುದು ನೆನಪಿದಿಯಾ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಕೆ. ಸುಧಾಕರ್ ಪ್ರಶ್ನಿಸಿದ್ದಾರೆ.

ಸ್ವಾಮೀಜಿಗಳ ಫೋನ್ ಕದ್ದಾಲಿಕೆ ಪ್ರಕರಣ ಇನ್ನೂ ಜೀವಂತವಾಗಿದೆ. ನಿಮ್ಮ ಫೋನ್ ಕದ್ದಾಲಿಕೆ ಮಾಡುವಂತಹ ದರಿದ್ರ ನಮ್ಮ ಸರ್ಕಾರಕ್ಕೆ ಬಂದಿಲ್ಲ. ನಿಮ್ಮ ಹೇಳಿಕೆ ಹಾಸ್ಯಾಸ್ಪದ, ಪ್ರತಿ ಮಾತಿನಲ್ಲೂ ಪ್ರಚಾರ ಬಯಸುತ್ತೀರಲ್ಲ, ನೀವು ಅಧಿಕಾರದಲ್ಲಿದ್ದಾಗ ನೇಕ ಸ್ವಾಮೀಜಿಗಳ ಫೋನ್ ಕದ್ದಾಲಿಕೆ ಮಾಡಿದ್ದೆವು ಎಂಬ ಸತ್ಯ ಹೇಳಿಬಿಡಿ ಎಂದು ಸುಧಾಕರ್ ಆಗ್ರಹಿಸಿದ್ದಾರೆ.

**ಕದ್ದಾಲಿಕೆ ಅನುಮಾನವಿದೆ: ಸಲೀಂ ಅಹಮದ್:** ಕೆಪಿಸಿಸಿ ಅಧ್ಯಕ್ಷರ ಫೋನ್ ಕದ್ದಾಲಿಕೆಯಾಗುತ್ತಿರುವ ಬಗ್ಗೆ



ಅನುಮಾನವಿದೆ. ಅವರ ಫೋನ್ ಮೇಲಿಂದ ಮೇಲೆ ನನ್ನ ಫೋನ್‌ಗೆ ಬರುತ್ತಿತ್ತು. ಈ ಬಗ್ಗೆ ತಿಳಿಸಲು ಎರಡು ಮೂರು ಸಾರಿ ಕರೆ ಮಾಡಿದ್ದೆ ಅವರು ಫೋನ್ ರಿಸಿವ್ ಆಗಲಿಲ್ಲ. ನಂತರ ಲ್ಯಾಂಡ್‌ಲೈನ್‌ಗೆ ಕರೆ ಮಾಡಿ ಮಾಹಿತಿ ನೀಡಿದೆ. ಆ ಮೇಲೆ ಅವರು ಪರೀಕ್ಷೆ ಮಾಡಿದಾಗ ಕದ್ದಾಲಿಕೆ ಆಗುತ್ತಿದೆ ಎಂಬ ಅನುಮಾನ ವ್ಯಕ್ತವಾಗಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹಮದ್ ಹೇಳಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸರ್ಕಾರದ ವಿರುದ್ಧ ಹೋರಾಟ ನಡೆಸುತ್ತಿದ್ದಾರೆ. ಡಿ.ಜೆ.ಹಳ್ಳಿ ಗಲಭೆಯ ಬಗ್ಗೆಯೂ ಧ್ವನಿ ಎತ್ತಿದ್ದರು. ಹೀಗಾಗಿ ಅವರ ಫೋನ್ ಕದ್ದಾಲಿಕೆ ಮಾಡುತ್ತಿರಬಹುದು ಎಂದು ಅವರು ಹೇಳಿದ್ದಾರೆ.